



ಅರುಣ ಪಿ. ಭಟ್ಟ


# ವಾರಭವಿಷ್ಯ: 07.08.2025ರಿಂದ 13.08.2025ರವರೆಗೆ




ಹಣಕಾಸಿನ ಹರಿವು ಹೆಚ್ಚಿಸಿಕೊಳ್ಳಲು ಹೊಸ ಆಯ್ಕೆಗಳು ಗೋಚರಿಸುತ್ತವೆ. ವೈಯಕ್ತಿಕ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆಗಳು ಕಾಣಿಸಿಕೊಳ್ಳುತ್ತವೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಆರೋಗ್ಯದಲ್ಲಿ ಸ್ವಲ್ಪ ಮಟ್ಟಿಗೆ ಏರುಪೇರಾಗಬಹುದು. ಸಾಮಾಜಿಕ ಮನ್ನಣೆಗೆ ಪಾತ್ರರಾಗಲಿದ್ದೀರಿ. ವಾರಾಂತ್ಯಕ್ಕೆ ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ: 08. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವೃತ್ತಿಪರರಿಗೆ ಉತ್ತಮವಾದ ಸಮಯ ಇದು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವವರಿಗೆ ಯಶಸ್ಸು ದೊರೆಯಲಿದೆ. ಅಧಿಕಾರದಲ್ಲಿ ಇರುವವರು ನಿಮ್ಮ ಶ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಲಿದ್ದಾರೆ. ನವೀಕರಣ ಕೆಲಸಗಳನ್ನು ಕೈಗೆತ್ತಿಕೊಳ್ಳುವ ಸಾಧ್ಯತೆ ಇದೆ. ಪ್ರೀತಿಪಾತ್ರರ ಭೇಟಿಯಿಂದ ಮನಸ್ಸಿಗೆ ಸಂತೋಷ ಆಗಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಶುಭದಿನ: 12. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.





ಉದ್ಯೋಗ ಹುಡುಕುತ್ತಿರುವವರಿಗೆ ಶುಭ ಸುದ್ದಿ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿದ್ದೀರಿ. ಗೊಂದಲ ಹುಟ್ಟುಹಾಕಿದ್ದ ವಿಚಾರಗಳಿಗೆ ಪರಿಹಾರ ದೊರೆಯಲಿದೆ. ಮನೆಯಲ್ಲಿ ಶುಭ ಕಾರ್ಯ ಆಯೋಜನೆ ಮಾಡಲಿದ್ದೀರಿ. ಹಿರಿಯರು ನಿಮ್ಮ ಬಗ್ಗೆ ಮೆಚ್ಚುಗೆಯನ್ನು ವ್ಯಕ್ತಪಡಿಸುತ್ತಾರೆ. ನೈತಿಕ ವಿಚಾರಗಳನ್ನೇ ಹೆಚ್ಚು ಚಿಂತಿಸುತ್ತೀರಿ. ಶುಭದಿನ: 13. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.





ಕಾನೂನು ವ್ಯಾಜ್ಯಗಳಿದ್ದಲ್ಲಿ ಜಯ ಪಡೆಯುವ ಅವಕಾಶ ಇದೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಉದ್ಯೋಗದ ಸಲುವಾಗಿ ದೂರ ಪ್ರಯಾಣ ಮಾಡುವ ಯೋಗವಿದೆ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ನಿಮ್ಮ ಶ್ರಮ ಹಾಗೂ ದುಡಿಮೆಗೆ ಮೆಚ್ಚುಗೆ ದೊರೆಯಲಿದೆ. ಕ್ರಿಯಾತ್ಮಕ ಕೆಲಸಗಳಿಗೆ  ಮನ್ನಣೆ ದೊರೆಯಲಿದೆ. ಶುಭದಿನ: 12. ಕಾಲ ಭೈರವನ ಸೇವೆ ಮಾಡಿರಿ.




ವಾರದ ಮಧ್ಯಭಾಗದಲ್ಲಿ ಮುಖ್ಯವಾದ ಯೋಜನೆಯ ಮೇಲುಸ್ತುವಾರಿ ಸಲುವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ವಿದೇಶದಲ್ಲೇ ನೆಲೆಯಾಗಬೇಕು ಎಂದು ಪ್ರಯತ್ನ ಮಾಡುತ್ತಿರುವವರಿಗೆ ವಿವಿಧ ಪ್ರಕ್ರಿಯೆಗಳು ಸರಾಗವಾಗಿ ಪೂರ್ಣಗೊಳ್ಳಲಿವೆ. ವಾರದ ಅಂತ್ಯದಲ್ಲಿ ಆರೋಗ್ಯದಲ್ಲಿ ಸ್ವಲ್ಪ ಏರುಪೇರಾಗಲಿದೆ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಶುಭದಿನ: 11. ಈಶ್ವರನಿಗೆ ತಿಲಾರ್ಚನೆ ಮಾಡಿರಿ.





ಗೌರವ ಪಡೆಯುವ ಅವಕಾಶ ಇದೆ. ಮಾರ್ಕೆಟಿಂಗ್ ವಿಭಾಗದಲ್ಲಿ ಇರುವವರಿಗೆ ಕೆಲಸಗಳು ಅಂದುಕೊಂಡ ವೇಗದಲ್ಲಿ ಸಾಗುವುದಿಲ್ಲ. ಪ್ರತಿಸ್ಪರ್ಧಿಗಳ ವಿರುದ್ಧ ಮೇಲುಗೈ ಸಾಧಿಸಲಿದ್ದೀರಿ. ಶುಭ ಸುದ್ದಿ ಕೇಳಲಿದ್ದೀರಿ. ಸಂಗಾತಿ ಜತೆಗಿನ ಭಿನ್ನಾಭಿಪ್ರಾಯಗಳನ್ನು ಬಗೆಹರಿಸಿಕೊಳ್ಳಲು ಸೂಕ್ತ ಸಮಯ ಇದು. ಕಾನೂನು ವಿಚಾರಗಳಿಗೆ ಹೆಚ್ಚಿನ ಗಮನ ನೀಡಬೇಕಾಗುತ್ತದೆ. ಶುಭದಿನ: 12. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.





ವಿವಿಧ ಕ್ಷೇತ್ರಗಳಲ್ಲಿ ಪ್ರಗತಿ ಪಡೆಯಲಿದ್ದೀರಿ. ಕ್ರೀಡಾಪಟುಗಳಿಗೆ ಯಶಸ್ಸು ಪಡೆಯುವ ಯೋಗ ಇದೆ. ವೈಯಕ್ತಿಕ ಬದುಕು ಸಂತುಷ್ಟವಾಗಿರುತ್ತದೆ. ಫ್ಯಾಷನ್ ವಸ್ತುಗಳ ಖರೀದಿಗೆ ಸಮಯ ಕಳೆಯಲಿದ್ದೀರಿ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಪಡೆಯುವ ಯೋಗ ಇದೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಲಿದೆ. ವ್ಯವಹಾರ ಮಾಡುವಾಗ ಸೂಕ್ಷ್ಮವಾಗಿ ವರ್ತಿಸಿ. ಶುಭದಿನ: 13. ಲಿಂಗಾಷ್ಟಕ ಓದಿರಿ.





ವೈಯಕ್ತಿಕ ಬದುಕು ಉತ್ತಮವಾಗಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಇದೆ. ಗೃಹ ನಿರ್ಮಾಣ ವಿಚಾರದಲ್ಲಿ ಪ್ರಗತಿ. ಹಿರಿಯರು ಮೆಚ್ಚುಗೆ ಸೂಚಿಸಲಿದ್ದಾರೆ. ಮಕ್ಕಳು ಮಾಡುವ ಕೆಲಸಗಳಿಂದ ಹೆಮ್ಮೆ ಮೂಡಲಿದೆ. ಹಣಕಾಸು ಹರಿವು ಹೆಚ್ಚಲಿದೆ. ಹಣ ಗಳಿಕೆಯ ದಾರಿಗಳು ಗೋಚರಿಸಲಿವೆ. ಕೆಲಸಗಳು ಪೂರ್ಣವಾಗಲು ಸ್ವತಃ ನೀವೇ ಮುಂಚೂಣಿಯಲ್ಲಿ ನಿಲ್ಲಬೇಕು. ಶುಭದಿನ: 07. ಹನುಮಾನ್ ಚಾಲೀಸ್ ಓದಿರಿ.





ಬಡ್ತಿ ದೊರೆಯುವ ಸಮಯ ಇದು. ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ನವೀಕರಣ, ಗೃಹಾಲಂಕಾರದ ಕಡೆಗೆ ಗಮನ ನೀಡುತ್ತೀರಿ. ಆರೋಗ್ಯ ಸಮಸ್ಯೆಗಳಿಗೆ ಪರಿಹಾರ ದೊರೆಯುತ್ತದೆ. ಹಣಕಾಸಿನ ಹರಿವು ಉತ್ತಮವಾಗಿರುತ್ತದೆ. ವರ ಅನ್ವೇಷಣೆಯಲ್ಲಿ ತೊಡಗಿದ್ದರೆ ಸೂಕ್ತ ಸಂಬಂಧಗಳು ದೊರೆಯಲಿವೆ. ಶುಭದಿನ: 12. ನವದುರ್ಗಾ ಆರಾಧನೆ ಮಾಡಿರಿ.




ಪಿತ್ರಾರ್ಜಿತವಾದ ಆಸ್ತಿ ವ್ಯವಹಾರಗಳು ನೀವು ಅಂದುಕೊಂಡಂತೆ ನಡೆಯುತ್ತವೆ. ಆಸ್ತಿ ವ್ಯವಹಾರದಲ್ಲಿ ಲಾಭ ಗಳಿಸಲಿದ್ದೀರಿ. ಕಾನೂನು ವ್ಯಾಜ್ಯಗಳಿದ್ದಲ್ಲಿ ಪರಿಹಾರ ದೊರೆಯಲಿದೆ. ಧಾರ್ಮಿಕ ವಿಚಾರಗಳಿಗೆ ಹೆಚ್ಚು ಸಮಯ ಮೀಸಲಿಡಲಿದ್ದೀರಿ. ಅಧಿಕಾರದಲ್ಲಿ ಇರುವವರು ನಿಮ್ಮ ಕೆಲಸದ ಸಾಮರ್ಥ್ಯ ಮತ್ತು ಅನುಭವದ ಬಗ್ಗೆ ಮೆಚ್ಚುಗೆಯ ಮಾತುಗಳನ್ನು ಹೇಳಲಿದ್ದಾರೆ. ಶುಭದಿನ: 10. ಚಂಡಿಪಾರಾಯಣ ಮಾಡಿರಿ.




ಪ್ರೀತಿಪಾತ್ರರ ಜೊತೆಗೆ ಮನರಂಜನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದೀರಿ. ಹಿರಿಯ ಅಧಿಕಾರಿಗಳಿಂದ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ನಿಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ಮಾಡಲಿದ್ದೀರಿ. ಉದ್ಯಮದ ವಿಚಾರವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಪಿತ್ರಾರ್ಜಿತ ಆಸ್ತಿಯಿಂದ ಲಾಭ ಆಗುವ ಯೋಗ ಇದೆ. ಶುಭದಿನ: 07. ಸೌಂದರ್ಯ ಲಹರಿ ಪಠಿಸಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ನಿಮ್ಮ ಪರ ತೀರ್ಪು ಬರುವ ಸಾಧ್ಯತೆ ಇದೆ. ಮೇಲಧಿಕಾರಿಗಳಿಂದ ನಿರೀಕ್ಷಿತ ಮಟ್ಟದ ಪ್ರೋತ್ಸಾಹ ದೊರೆಯಲಿದೆ. ಆರೋಗ್ಯದ ಬಗ್ಗೆ ನಿಯಮಿತವಾದ ಕಾಳಜಿ ತೆಗೆದುಕೊಳ್ಳುವುದು ಅತ್ಯಗತ್ಯ. ಉದ್ಯೋಗಸ್ಥರಿಗೆ ಹೊಸ ಜವಾಬ್ದಾರಿಗಳು ಹೆಗಲೇರಲಿವೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಿ ಇರಲಿವೆ. ಉತ್ತಮವಾಗಿ ಸಮಯ ಕಳೆಯಲಿದ್ದೀರಿ. ಶುಭದಿನ: 12. ವಿಷ್ಣು ಸಹಸ್ರನಾಮ ಪಠಿಸಿರಿ.